ಮಂಗಳವಾರ 12.08.2025 ಬೆಂಗಳೂರು ಗ್ರಾಮಾಂತರ ಬೆಲೆ: 5ರೂ, 2 ಪುಟಗಳು ಸಂಪುಟ 01 - ಸಂಚಿಕೆ 22 Digital Varthe Kannada Daily Volume 01 - Issue 22 Tuesday 11.08.2025 Price: 5/- Rs 2 Pages Bangalore Rural

DIGITAL VARTHE
www.digitalvarthe.com

# ಡಿಜಿಟಲ್ ವಾರ್ತೆ

RNI: KNKAN/25/A1348 ಕನ್ನಡಿಗರ ಶಕ್ತಿ ಕನ್ನಡ ದಿನಪತ್ರಿಕೆ


ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

digitalvarthe@gmail.com

# ಸಿದ್ದರಾಮಯ್ಯ ಸಚಿವ ಸಂಪುಟದಿಂದ ಕೆಎನ್ ರಾಜಣ್ಣ ವಜಾ!

## ಮತ ಕಳ್ಳತನ ಕುರಿತ ಹೇಳಿಕೆ, ಸರ್ಕಾರದ ವಿರುದ್ಧ ಟೀಕೆ – ಹೈಕಮಾಂಡ್ ಅಸಮಾಧಾನ



ಬೆಂಗಳೂರು: ಸಿಎಂ ಸಿದ್ದರಾಮಯ್ಯ ಅವರ ಶಿಫಾರಸಿನ ಮೇರೆಗೆ, ಸಹಕಾರ ಸಚಿವ ಕೆ.ಎನ್. ರಾಜಣ್ಣ ಅವರನ್ನು ಸೋಮವಾರ ಸಚಿವ ಸಂಪುಟದಿಂದ ವಜಾಗೊಳಿಸಲಾಗಿದೆ. ಆರಂಭದಲ್ಲಿ ಸಿಎಂ ಅವರು ರಾಜಣ್ಣ ಅವರಿಗೆ ಸ್ವಯಂ ರಾಜೀನಾಮೆ ನೀಡುವಂತೆ ಸೂಚಿಸಿದ್ದರೂ, ಅವರು ನಿರಾಕರಿಸಿದ ಕಾರಣ ನೇರ ವಜಾ ಕ್ರಮ ಕೈಗೊಳ್ಳಲಾಯಿತು. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಗೆ ಸಿಎಂ ಮಧ್ಯಾಹ್ನ ವಜಾ ಪತ್ರ ಕಳುಹಿಸಿದ್ದರು. ರಾಜ್ಯಪಾಲರು ಕೂಡಲೇ ಒಪ್ಪಿಗೆ ನೀಡಿ ಅಧಿಸೂಚನೆ ಜಾರಿಗೊಳಿಸಿದರು. ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಆರ್. ಪ್ರಭುಶಂಕರ್ ಅವರು ಈ ಕುರಿತು ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಪತ್ರ ಬರೆದಿದ್ದಾರೆ.

- ಸಿಎಂ ಶಿಫಾರಸಿನ ಮೇರೆಗೆ ರಾಜ್ಯಪಾಲರಿಂದ ತಕ್ಷಣದ ವಜಾ
- “ಮತ ಕಳ್ಳತನ” ಆರೋಪದಲ್ಲಿ ಸರ್ಕಾರದ ವಿರುದ್ಧ ಟೀಕೆ
- ಸೆಪ್ಟೆಂಬರ್ ಕ್ರಾಂತಿ ಹೇಳಿಕೆಯ ಹಿನ್ನೆಲೆ
- ವಿಧಾನಸಭೆಯಲ್ಲಿ ಚರ್ಚೆ, ಬಿಜೆಪಿಯಿಂದ ಕಟುವಾದ ಪ್ರಶ್ನೆಗಳು
- ರಾಜಣ್ಣ ಪ್ರತಿಕ್ರಿಯೆಯಲ್ಲಿ ಅಸಮಾಧಾನ ಸ್ಪಷ್ಟ

**ಹೈಕಮಾಂಡ್ ಕೋಪಕ್ಕೆ ಕಾರಣವಾದ ಹೇಳಿಕೆ:** 2024ರ ಲೋಕಸಭಾ ಚುನಾವಣೆಯ ವೇಳೆ ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ ಮತದಾರರ ಪಟ್ಟಿಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪಗಳು ಕೇಳಿಬಂದಿದ್ದವು. ರಾಹುಲ್ ಗಾಂಧಿ, “ಮತ ಕಳ್ಳತನದಿಂದ ಬಿಜೆಪಿ ಅಧಿಕಾರಕ್ಕೆ ಬಂದಿದೆ” ಎಂದು ಸಾರ್ವಜನಿಕವಾಗಿ ಆರೋಪಿಸಿದ್ದರು. ಆದರೆ ಈ ಬೆನ್ನಲ್ಲೇ, ರಾಜಣ್ಣ ಅವರು “ಮತ ಕಳ್ಳತನಕ್ಕೆ ಕಾಂಗ್ರೆಸ್ ಸರ್ಕಾರವನ್ನೇ ಹೊಣೆ” ಎಂದು ಹೇಳಿ ಹೈಕಮಾಂಡ್‌ಗೆ ಅಸಮಾಧಾನ ತಂದರು. ಅವರು “ನಮ್ಮ ಕಣ್ಣ ಮುಂದೆ ಅಕ್ರಮ ನಡೆದಿದೆ” ಎಂಬ ಹೇಳಿಕೆಯಿಂದ ಪಕ್ಷದ ಒಳಾಂಗಣಕ್ಕೆ ನೇರ ಹೊಡೆತ ನೀಡಿದರು.

**ಸೆಪ್ಟೆಂಬರ್ ಕ್ರಾಂತಿ ಹೇಳಿಕೆ ಮತ್ತು ರಾಜಕೀಯ ಊಹಾಪೋಹಗಳು:** ಇದರ ಜೊತೆಗೆ, ಕಳೆದ ಎರಡು ತಿಂಗಳಿನಿಂದ ರಾಜಣ್ಣ ಅವರು “ಸೆಪ್ಟೆಂಬರ್ ಕ್ರಾಂತಿ” ಕುರಿತು ಹೇಳಿಕೆ ನೀಡುತ್ತಿದ್ದರು. ಇದರಿಂದ ಸರ್ಕಾರದಲ್ಲಿ ಸಚಿವ ಸ್ಥಾನ ಬದಲಾವಣೆ ಅಥವಾ ಆಂತರಿಕ ಬಂಡಾಯದ ಊಹಾಪೋಹಗಳು ಹೆಚ್ಚಾಗಿದ್ದವು. ಹೀಗಾಗಿ ಹೈಕಮಾಂಡ್‌ನಲ್ಲಿ ರಾಜಣ್ಣ ಅವರ ಮೇಲೆ ಅನುಮಾನ ಮತ್ತು ಅಸಮಾಧಾನ ಗಾಢವಾಯಿತು.

**ವಿಧಾನಸಭೆಯಲ್ಲಿ ಗರಮ ಚರ್ಚೆ:** ಸೋಮವಾರ ನಡೆದ ವಿಧಾನಸಭಾ ಅಧಿವೇಶನದಲ್ಲೂ ಈ ವಿಷಯ ಚರ್ಚೆಗೆ ಗ್ರಾಸವಾಯಿತು. ಬಿಜೆಪಿ ಶಾಸಕರು, “ರಾಜಣ್ಣ ಸಚಿವರಾಗಿ ಕುಳಿತಿದ್ದಾರೆ ಅಥವಾ ಸಾಮಾನ್ಯ ಶಾಸಕರಾಗಿ?” ಎಂದು ಪ್ರಶ್ನಿಸಿದರು. ವಿರೋಧ ಪಕ್ಷದ ನಾಯಕ ಆರ್. ಅಶೋಕ ಮಾತನಾಡಿ “ರಾಜಣ್ಣ ವಿರುದ್ಧ ಭ್ರಷ್ಟಾಚಾರ ಆರೋಪಗಳಿವೆಯೇ? ಅವರು ಎಷ್ಟು ಹಣ ಸಂಪಾದಿಸಿದ್ದಾರೆ? ಮತದಾನ ಸಮಯದಲ್ಲಿ ಕಾಂಗ್ರೆಸ್ ಸರ್ಕಾರವಿತ್ತು ಎಂಬ ಸತ್ಯವನ್ನು ಹೇಳಿದ್ದಾರೆ” ಎಂದು ಹೇಳಿದರು. ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್ ಮಾತನಾಡಿ ಮಾಧ್ಯಮ ವರದಿ ಆಧಾರದ ಮೇಲೆ ಸರ್ಕಾರ ತಕ್ಷಣ ಉತ್ತರ ನೀಡಬೇಕೆಂಬುದು ಸರಿಯಲ್ಲ ಎಂದರು.

**ರಾಜಣ್ಣನ ಪ್ರತಿಕ್ರಿಯೆ:** ಚರ್ಚೆಗೆ ಪ್ರತಿಕ್ರಿಯಿಸಿದ ರಾಜಣ್ಣ, “ನಾನು ರಾಜೀನಾಮೆ ನೀಡಿದ್ದೇನೋ ಇಲ್ಲವೋ, ನನ್ನನ್ನು ಯಾರು ಕೇಳಿದರು ಎಂಬುದಕ್ಕೆ ಸಂಸದೀಯ ವ್ಯವಹಾರಗಳ ಸಚಿವರು ಮತ್ತು ಸಿಎಂ ಉತ್ತರಿಸುತ್ತಾರೆ” ಎಂದು ಹೇಳಿದರು. ಅವರ ಧ್ವನಿಯಲ್ಲಿ ಅಸಮಾಧಾನ ಸ್ಪಷ್ಟವಾಗಿತ್ತು.

ರಾಜಣ್ಣ ವಜಾ ಕ್ರಮವು ಕಾಂಗ್ರೆಸ್ ಸರ್ಕಾರದಲ್ಲಿ ಅಸಮಾಧಾನದ ಅಲೆ ಎಬ್ಬಿಸಿದೆ. ಪಕ್ಷದ ಒಳಾಂಗಣದಲ್ಲಿ ಶಿಸ್ತು ಪಾಲನೆಗೆ ಹೈಕಮಾಂಡ್ ಗಂಭೀರವಾಗಿದೆ ಎಂಬ ಸಂದೇಶ ಈ ಕ್ರಮದಿಂದ ಸ್ಪಷ್ಟವಾಗಿದೆ. ಜೆಡಿಎಸ್ ಬಿಜೆಪಿ ಇದನ್ನು ಕಾಂಗ್ರೆಸ್ ಸರ್ಕಾರದ ಆಂತರಿಕ ಕಲಹವೆಂದು ಆರೋಪಿಸಿ ರಾಜಕೀಯ ಲಾಭ ಪಡೆಯಲು ಪ್ರಯತ್ನಿಸುತ್ತಿದೆ.

# ಅರಳಸಂದ್ರದಲ್ಲಿ ಎರಡು ಹಸುಗಳ ಕತ್ತು ಸೀಳಿ ಭೀಕರ ಹತ್ಯೆ



AI ನಿರ್ಮಿತ ಚಿತ್ರ

## ನಿರಂತರ ವಿಕೃತಿ ಕೃತ್ಯಗಳಿಂದ ಗ್ರಾಮಸ್ಥರಲ್ಲಿ ಭೀತಿ – ಪೊಲೀಸರು ತನಿಖೆ ಆರಂಭ

**ನೆಲಮಂಗಲ**: ಬೆಂಗಳೂರಿನಲ್ಲಿ ಇತ್ತೀಚೆಗೆ ನಡೆದ ಹಸುಗಳ ಕೆಚ್ಚಲು ಕತ್ತರಿಸಿದ ಘಟನೆ ಮರೆಯುವ ಮುನ್ನವೇ, ಮತ್ತೊಂದು ಅಮಾನವೀಯ ಕೃತ್ಯ ನೆಲಮಂಗಲ ತಾಲೂಕಿನ ಅರಳಸಂದ್ರ ಗ್ರಾಮದಲ್ಲಿ ನಡೆದಿದೆ. ಅಪರಿಚಿತರು ಎರಡು ಹಸುಗಳ ಕತ್ತು ಸೀಳಿ ಹತ್ಯೆಮಾಡಿ, ಅವುಗಳನ್ನು ರಸ್ತೆಯ ಮಧ್ಯೆ ಬಿಟ್ಟು ಹೋಗಿದ್ದಾರೆ.

**ಘಟನೆ ವಿವರ:** ಅರಳಸಂದ್ರ ಗ್ರಾಮದ ಹೊರವಲಯದಲ್ಲಿ ಮುಂಜಾನೆ ಗ್ರಾಮಸ್ಥರು ಎರಡು ಹಸುಗಳ ಶವಗಳನ್ನು ಕಂಡು ಬೆಚ್ಚಿಬಿದ್ದರು. ತಕ್ಷಣವೇ ಅವರು ನೆಲಮಂಗಲ ಗ್ರಾಮಾಂತರ ಪೊಲೀಸ್ ಠಾಣೆಗೆ ಮಾಹಿತಿ ನೀಡಿದ್ದಾರೆ. ಘಟನೆ ನಡೆದ ಸ್ಥಳಕ್ಕೆ ಪೊಲೀಸರು ಧಾವಿಸಿ ಪರಿಶೀಲನೆ ನಡೆಸಿದ್ದಾರೆ.

**ಗ್ರಾಮಸ್ಥರ ಆತಂಕ:** ಸ್ಥಳೀಯರು, “ಇತ್ತೀಚೆಗೆ ಹಸುಗಳ ಮೇಲೆ ದಾಳಿ, ವಿಕೃತಿ ಕೃತ್ಯಗಳು ಹೆಚ್ಚುತ್ತಿವೆ. ಈಗ ನೇರವಾಗಿ ಹತ್ಯೆ ಮಾಡಿರುವುದು ಅಸಹ್ಯಕರ. ಪೊಲೀಸರು ತಕ್ಷಣ ಕಿಡಿಗೇಡಿಗಳನ್ನು ಪತ್ತೆ ಮಾಡಿ, ಕಠಿಣ ಶಿಕ್ಷೆ ನೀಡಬೇಕು” ಎಂದು ಆಗ್ರಹಿಸಿದರು. ಹಿಂದಿನ ಕೆಲವು ತಿಂಗಳಲ್ಲಿ ಇದೇ ರೀತಿಯ ಹಸುಗಳ ವಿಕೃತಿ ಪ್ರಕರಣಗಳು ವರದಿಯಾಗಿದ್ದು , ಗ್ರಾಮಸ್ಥರಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ.

**ಪೊಲೀಸರ ತನಿಖೆ:**ಪೊಲೀಸರು ಸುತ್ತಮುತ್ತಲಿನ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸುತ್ತಿದ್ದಾರೆ. ಅಪರಿಚಿತರ ಗುರುತು ಪತ್ತೆಹಚ್ಚಲು ವಿಶೇಷ ತಂಡ ರಚಿಸಲಾಗಿದೆ. ಈ ಕೃತ್ಯದ ಹಿಂದಿನ ಉದ್ದೇಶ – ದುಷ್ಟರ
ಕೃತ್ಯವೋ ಅಥವಾ ಇನ್ನೇನಾದರೂ ಉದ್ದೇಶವೋ – ತನಿಖೆಯಿಂದ ತಿಳಿಯಬೇಕಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಆಶಾ ಕಾರ್ಯಕರ್ತೆಯರ ಮುಷ್ಕರ: ಸಿಬ್ಬಂದಿಗೆ ರಜೆ ನೀಡದಂತೆ ಆರೋಗ್ಯ ಇಲಾಖೆ ಸೂಚನೆ

ಬೆಂಗಳೂರು: ಆಶಾ ಕಾರ್ಯಕರ್ತೆಯರು ಇದೇ ಆಗಸ್ಟ್ 12 ರಿಂದ ಮೂರು ದಿನಗಳ ಕಾಲ ಮುಷ್ಕರಕ್ಕೆ ಮುಂದಾಗಿರುವ ಹಿನ್ನೆಲೆಯಲ್ಲಿ ವೈದ್ಯಕೀಯ ತುರ್ತು ಪರಿಸ್ಥಿತಿ ಹೊರತುಪಡಿಸಿ, ಪ್ರತಿಭಟನಾ ಅವಧಿಯಲ್ಲಿ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿ ರಜೆ ತೆಗೆದುಕೊಳ್ಳುವುದನ್ನು ನಿರ್ಬಂಧಿಸಿ ಕರ್ನಾಟಕ ಆರೋಗ್ಯ ಇಲಾಖೆ ಸೋಮವಾರ ಸುತ್ತೋಲೆ ಹೊರಡಿಸಿದೆ. ಮಾನ್ಯತೆ ಪಡೆದ ಆರೋಗ್ಯ ಕಾರ್ಯಕರ್ತೆಯರು ಜನವರಿಯಲ್ಲಿ ರಾಜ್ಯ ಸರ್ಕಾರ ಭರವಸೆ ನೀಡಿದಂತೆ 10,000 ರೂ.ಗಳ ನಿಗದಿತ ಗೌರವಧನ ನೀಡಬೇಕು ಎಂದು ಆಗ್ರಹಿಸಿ ಆಗಸ್ಟ್ 12 ರಿಂದ 14 ರವರೆಗೆ ರಾಜ್ಯ ಮಟ್ಟದ ಪ್ರತಿಭಟನೆ ನಡೆಸುವುದಾಗಿ ಘೋಷಿಸಿದ್ದಾರೆ.

# ಮಧುರನಹೊಸಹಳ್ಳಿಯಲ್ಲಿ ಶ್ರಾವಣ ಮಾಸದ ಭಜನಾ ಮಹೋತ್ಸವ



ದೊಡ್ಡಬಳ್ಳಾಪುರ: ಮೂರನೇ ಶ್ರಾವಣ ಶನಿವಾರದ ಅಂಗವಾಗಿ ದೊಡ್ಡಬಳ್ಳಾಪುರ ತಾಲೂಕಿನ ಮಧುರನಹೊಸಹಳ್ಳಿ ಗ್ರಾಮದಲ್ಲಿ ಭಜನಾ ಕಾರ್ಯಕ್ರಮವನ್ನು ಭಕ್ತಿಭಾವದಿಂದ ಆಯೋಜಿಸಲಾಯಿತು. ಈ ಕಾರ್ಯಕ್ರಮವು ಕಳೆದ 98 ವರ್ಷಗಳಿಂದ ನಿರಂತರವಾಗಿ ನಡೆಯುತ್ತಿದ್ದು , ಗ್ರಾಮೀಣ ಕಲೆ-ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಮಹತ್ವದ ಹಬ್ಬವಾಗಿದೆ.

ಶ್ರಾವಣ ಮಾಸದ ಭಜನಾ ಕಾರ್ಯಕ್ರಮವು 1928ರಲ್ಲಿ ದೊಡ್ಡಬೆಳವಂಗಲ ಹೋಬಳಿಯಲ್ಲಿ ಪ್ರಾರಂಭವಾಯಿತು. ದೊಡ್ಡಹೆಜ್ಜಾಜಿ ಗ್ರಾಮದ ಸೀತಾರಾಮ್ ಶರ್ಮಾ, ಹೊನ್ನಾದೇವಿಪುರದ ಸುಬ್ಬೇಗೌಡರು, ಮಧುರನಹೊಸಹಳ್ಳಿಯ ಕೃಷ್ಣಾಚಾರ್, ಚಿಕ್ಕಹೆಜ್ಜಾಜಿಯ ಕೋಟೆ ನಾರಾಯಣರಾವ್ ಮತ್ತಿತರರ ನೇತೃತ್ವದಲ್ಲಿ ಈ ಭಜನಾ ಪರಂಪರೆ ಹುಟ್ಟುಹಾಕಲಾಯಿತು. ಪ್ರಸ್ತುತ ದೊಡ್ಡಹೆಜ್ಜಾಜಿ ಶ್ರೀಸೀತಾರಾಮ ಭಜನಾ ಸಂಘ ಈ ಕಾರ್ಯಕ್ರಮದ ನಿರ್ವಹಣೆ ಮಾಡುತ್ತಿದೆ.

ಶ್ರಾವಣ ಮಾಸದ ಮೊದಲ ದಿನ ದೊಡ್ಡಹೆಜ್ಜಾಜಿಯಲ್ಲಿ ಭಜನೆ ಪ್ರಾರಂಭವಾಗಿ, ಕೊನೆಯ ದಿನ ರಾಮೇಶ್ವರ ಗ್ರಾಮದಲ್ಲಿ ಕೊನೆಗೊಳ್ಳುತ್ತದೆ.
ಭಜನೆಯ ಶಾಂತಿ ಸಮಾರಾಧನೆ ಫೆಬ್ರವರಿಯಲ್ಲಿ ಮಾಡೇಶ್ವರ ಗ್ರಾಮದಲ್ಲಿ ನಡೆಯುವುದು ಪರಂಪರೆಯಾಗಿದೆ.
ದೊಡ್ಡಹೆಜ್ಜಾಜಿ, ಶ್ಯಾಕಲದೇವನಪುರ, ಪುಟ್ಟಯ್ಯನ ಅಗ್ರಹಾರ, ಕತ್ತಾಳೆಪಾಳ್ಯ, ಚಿಕ್ಕಹೆಜ್ಜಾಜಿ, ಹಾದ್ರಿಪುರ, ದೊಡ್ಡಬೆಳವಂಗಲ, ಮಧುರನಹೊಸಹಳ್ಳಿ, ಕಾರೇಪುರ, ಕುಂಟನಹಳ್ಳಿ, ಮಾಡೇಶ್ವರ, ಚಿಕ್ಕಬೆಳವಂಗಲ, ಲಿಂಗಾಪುರ, ರಾಮೇಶ್ವರ ಸೇರಿದಂತೆ ಅನೇಕ ಗ್ರಾಮಗಳಲ್ಲಿ ಭಜನಾ ಕಾರ್ಯಕ್ರಮ ಸಾಗುತ್ತದೆ.

## 98 ವರ್ಷಗಳ ನಿರಂತರ ಭಜನಾ ಪರಂಪರೆ – ಗ್ರಾಮೀಣ ಸಂಸ್ಕೃತಿಯ ಜೀವಂತ ಸಾಕ್ಷಿ

ಹಾರ್ಮೋನಿಯಂ, ತಬಲ, ತಾಳಗಳ ಸೊಬಗಿನೊಂದಿಗೆ ಕಲಾವಿದರು ಪುರಂದರದಾಸ, ಕನಕದಾಸ, ತತ್ತ್ವಪದಕಾರರು, ಶಿಶುನಾಳ ಶರೀಫ್ ಹಾಗೂ ಜನಪದ ಕವಿಗಳ ರಚನೆಗಳನ್ನು ಹಾಡುತ್ತಾರೆ.
ಹರಿಕಥಾ ವಿದ್ವಾಂಸರು, ವಿವಿಧ ಗ್ರಾಮಗಳ ಭಜನಾ ಮಂಡಳಿ ಸದಸ್ಯರು ಭಾಗವಹಿಸುತ್ತಾರೆ.
ಗ್ರಾಮದ ಪ್ರತಿಯೊಂದು ಮನೆಗೂ ಭಜನಾ ತಂಡ ತೆರಳಿ, ಸ್ವಲ್ಪ ಕಾಲ ಭಜನೆ ಹಾಗೂ ಪೂಜೆ ನಡೆಸುವುದು ವಿಶೇಷ ಆಕರ್ಷಣೆ.

### ಸಂಘದ ಪ್ರಸ್ತುತ ಮಂಡಳಿ

ಅಧ್ಯಕ್ಷರು:
ಮಧುರನಹೊಸಹಳ್ಳಿಯ ಕೆಂಪೇಗೌಡರು
ಉಪಾಧ್ಯಕ್ಷರು:
ಶ್ಯಾಕಲದೇವನಪುರದ ಎಸ್. ರೇಣುಕಯ್ಯ
ಗೌರವ ಕಾರ್ಯದರ್ಶಿ:
ಹೆಚ್.ಎನ್. ಅನಂತರಾಮ ರಾವ್ (ಚಿಕ್ಕಹೆಜ್ಜಾಜಿ)
ಕಾರ್ಯದರ್ಶಿ:
ಹೆಚ್.ಎನ್. ನರಹರಿರಾವ್ (ಚಿಕ್ಕಹೆಜ್ಜಾಜಿ)
ಸಹ ಕಾರ್ಯದರ್ಶಿ:
ವಿ. ಸೋಮಶೇಖರ್ (ಚಿಕ್ಕಹೆಜ್ಜಾಜಿ ಕಾಲೋನಿ)
ಖಜಾಂಚಿ:
ಡಿ. ಕರಿಬಸವದೇವರು (ದೊಡ್ಡಹೆಜ್ಜಾಜಿ)
ನಿರ್ದೇಶಕರು:
ಗಂಗಮುತ್ತಯ್ಯ, ಟಿ. ಮುನಿರಾಜು, ಆನಂದಾಚಾರ್, ಉಮೇಶ್ ಎಂ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ST ಯುವಕರಿಬ್ಬರ ಮೇಲೆ ಮೇಲ್ಜಾತಿ ಗುಂಪಿನಿಂದ ಹಲ್ಲೆ!

## ಅಪ್ರಾಪ್ತ ಬಾಲಕಿಯನ್ನು ಚುಡಾಯಿಸಿದ ಆರೋಪದ ಮೇಲೆ ಹಲ್ಲೆ!!

ಬೆಳಗಾವಿ: ಜಿಲ್ಲೆಯ ರಾಮದುರ್ಗ ತಾಲ್ಲೂಕಿನ ಗೊಡಚಿ ಗ್ರಾಮದಲ್ಲಿ ಆಘಾತಕಾರಿ ಘಟನೆ ಬೆಳಕಿಗೆ ಬಂದಿದ್ದು, ಅಪ್ರಾಪ್ತ ಬಾಲಕಿಯನ್ನು ಚುಡಾಯಿಸಿದ ಆರೋಪದ ಮೇಲೆ ಪರಿಶಿಷ್ಟ ಪಂಗಡ (ಎಸ್‌ಟಿ) ಸಮುದಾಯದ ಇಬ್ಬರು ಯುವಕರ ಮೇಲೆ ಹಲ್ಲೆ ನಡೆಸಲಾಗಿದೆ. ಯುವಕನೋರ್ವನನ್ನು ಮರಕ್ಕೆ ಕಟ್ಟಿ ಥಳಿಸಲಾಗಿದ್ದು, ಮತ್ತೊಬ್ಬನನ್ನು ಅವರ ಮನೆಯಲ್ಲೇ ಹಲ್ಲೆ ಮಾಡಲಾಗಿದೆ. ಈ ಘಟನೆ ಆಗಸ್ಟ್ 5ರಂದು ನಡೆದಿದ್ದು ತಡವಾಗಿ ಬೆಳಕಿಗೆ ಬಂದಿದೆ.

ಸಂತ್ರಸ್ತ ಯುವಕರನ್ನು ಗೊಡಚಿ ನಿವಾಸಿಗಳಾದ ಈರಣ್ಣ ವಿಠ್ಠಲ್ ನಾಯ್ಕರ್ (18) ಮತ್ತು ಲಕ್ಷ್ಮಣ ಮಲ್ಲಪ್ಪ ಚಿಪ್ಪಲಕಟ್ಟಿ (18) ಎಂದು ಗುರುತಿಸಲಾಗಿದೆ. ಪೊಲೀಸರ ಪ್ರಕಾರ, ದಾಳಿಕೋರರ ಕುಟುಂಬದ ಅಪ್ರಾಪ್ತ ಬಾಲಕಿಯನ್ನು ಚುಡಾಯಿಸಿದ ಆರೋಪದ ಮೇಲೆ ಮೇಲ್ಜಾತಿಯ ಗ್ರಾಮಸ್ಥರ ಗುಂಪೊಂದು ಯುವಕರ ಮೇಲೆ ಹಲ್ಲೆ ನಡೆಸಿದೆ ಎಂದು ಆರೋಪಿಸಲಾಗಿದೆ.

ಆಗಸ್ಟ್ 5 ರಂದೇ ಘಟನೆ ನಡೆದಿದ್ದರೂ ಸಂತ್ರಸ್ತ ಯುವಕರು ಮತ್ತು ಅವರ ಕುಟುಂಬಗಳು ತಕ್ಷಣ ಪೊಲೀಸ್ ದೂರು ದಾಖಲಿಸಲಿಲ್ಲ. ಬದಲಿಗೆ ಗ್ರಾಮದ ಹಿರಿಯರ ಮೂಲಕ ವಿಷಯವನ್ನು ಇತ್ಯರ್ಥಪಡಿಸಲು ನಿರ್ಧರಿಸಿದರು. ಆದರೆ, ಹಲ್ಲೆಯ ವಿಡಿಯೋ ಸಾಮಾಜಿಕ ಮಾಧ್ಯಮಗಳಲ್ಲಿ ವೈರಲ್ ಆದ ನಂತರ ಪೊಲೀಸರು ಸಂತ್ರಸ್ತರಿಗೆ ದೂರು ನೀಡುವಂತೆ ಒತ್ತಾಯಿಸಿದರು. ಈ ಸಂಬಂಧ ಆಗಸ್ಟ್ 8 ರಂದು ಕಟ್ಕೋಳ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ.

ಈರಣ್ಣ ಪಕನಟ್ಟಿ, ಬಸನಗೌಡ ಪಾಟೀಲ್, ಪ್ರದೀಪ್ ಪಕನಟ್ಟಿ, ಮಹಾಂತೇಶ್ ಪಕನಟ್ಟಿ, ಸಚಿನ್ ಪಕನಟ್ಟಿ, ನಿಂಗರಾಜ್ ಪಕನಟ್ಟಿ ಮತ್ತು ಸಂಗಪ್ಪ ಪಕನಟ್ಟಿ ಎಂಬುವರ ಮೇಲೆ ಎಫ್‌ಐಆರ್ ದಾಖಲಾಗಿದೆ. ಉಳಿದ ಆರೋಪಿಗಳಿಗಾಗಿ ಹುಡುಕಾಟ ಮುಂದುವರೆದಿದ್ದು, ಪೊಲೀಸರು ಈರಣ್ಣ ಪಕನಟ್ಟಿ, ಸಚಿನ್ ಪಕನಟ್ಟಿ ಮತ್ತು ಮಹಾಂತೇಶ್ ಪಕನಟ್ಟಿ ಎಂಬುವರನ್ನು ಬಂಧಿಸಿದ್ದಾರೆ. ಏತನ್ಮಧ್ಯೆ, ಅಪ್ರಾಪ್ತ ಬಾಲಕಿಯ ಕುಟುಂಬವು ಅದೇ ದಿನ ಇಬ್ಬರು ಯುವಕರ ವಿರುದ್ಧ ಪ್ರತಿ-ದೂರು ದಾಖಲಿಸಿದೆ. ಎರಡೂ ಪ್ರಕರಣಗಳು ಈಗ ಕಟ್ಕೋಳ್ ಪೊಲೀಸರಿಂದ ತನಿಖೆಯಲ್ಲಿವೆ. ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ನಂತರ ಈರಣ್ಣ ಮತ್ತು ಲಕ್ಷ್ಮಣ್ ನನ್ನು ಡಿಸ್ಚಾರ್ಜ್ ಮಾಡಲಾಯಿತು.

# ದೂರು ನೀಡುವುದಾಗಿ ಹೇಳಿದ ಮಗಳನ್ನೇ ಕೊಂದ ತಾಯಿ!

ಹೊಸಪೇಟೆ: ಅಪ್ರಾಪ್ತಳಾಗಿರುವಾಗಲೇ ತನಗೆ ಮದುವೆ ಮಾಡಿದ್ದರಿಂದ ಪೊಲೀಸರಿಗೆ ದೂರು ನೀಡುವುದಾಗಿ ಬೆದರಿಕೆ ಹಾಕಿದ್ದ 17 ವರ್ಷದ ಮಗಳನ್ನು ತಾಯಿಯೇ ಕೊಂದಿರುವ ಘಟನೆ ಇತ್ತೀಚೆಗೆ ವಿಜಯನಗರದ ಹೊಸಪೇಟೆ ಪಟ್ಟಣದಲ್ಲಿ ನಡೆದಿದೆ. ಬಾಲಕಿಯ ತಂದೆ ಶುಕ್ರವಾರ ಈ ಸಂಬಂಧ ದೂರು ದಾಖಲಿಸಿದ್ದು, ಪೊಲೀಸರು 48 ಗಂಟೆಗಳ ಒಳಗೆ ಪ್ರಕರಣವನ್ನು ಭೇದಿಸಿದ್ದಾರೆ. ಭಾನುವಾರ ತಾಯಿ ಮತ್ತು ಸಂತ್ರಸ್ತೆಯ ಪತಿಯನ್ನು ಬಂಧಿಸಿದ್ದಾರೆ.

ಕೊಲೆಯಾದ ಬಾಲಕಿ ನಾಲ್ಕು ತಿಂಗಳ ಹಿಂದೆ ಮಂಜುನಾಥ್ ಅಲಿಯಾಸ್ ಡಾಳಿ (24) ಎಂಬುವವರನ್ನು ವಿವಾಹವಾಗಿದ್ದಳು. ಆದರೆ, ಕೆಲವು ದಿನಗಳ ನಂತರ ಆತ ಯುವತಿಗೆ ಕಿರುಕುಳ ನೀಡಲು ಪ್ರಾರಂಭಿಸಿದ್ದನು. ಈ ಚಿತ್ರಹಿಂಸೆಯನ್ನು ಸಹಿಸಲಾಗದೆ, ಬಾಲಕಿ ತಾನು ಅಪ್ರಾಪ್ತೆಯಾಗಿದ್ದಾಗ ನನ್ನ ಮದುವೆ ಮಾಡಿದ್ದಕ್ಕಾಗಿ ಪೊಲೀಸರನ್ನು ಸಂಪರ್ಕಿಸಿ ದೂರು ನೀಡುವುದಾಗಿ ಗಂಡನಿಗೆ ಮತ್ತು ತನ್ನ ತಾಯಿಗೆ ಬೆದರಿಕೆ ಹಾಕಿದ್ದಳು. ಇದರಿಂದ ಕೋಪಗೊಂಡ ಆಕೆಯ ತಾಯಿ, ಮಗಳ ಕತ್ತು ಹಿಸುಕಿ ಕೊಂದಿದ್ದಾಳೆ. ಬಳಿಕ ತರುಣ್ (20) ಮತ್ತು ಅಕ್ಬರ್ (21) ಎಂಬ ಇಬ್ಬರು ಯುವಕರ ಸಹಾಯದಿಂದ ಮರಿಯಮ್ಮನಹಳ್ಳಿ ಸೇತುವೆಯ ಬಳಿ ಶವವನ್ನು ಹೂತು ಹಾಕಿದ್ದಾರೆ. ಬಾಲಕಿಯ ತಾಯಿ, ಪತಿ ಮಂಜುನಾಥ್ ಮತ್ತು ಇಬ್ಬರು ಸಹಚರರನ್ನು ಬಿಎನ್‌ಎಸ್ ಮತ್ತು ಪೋಕ್ಸೊ ಕಾಯ್ದೆಯ ಸೆಕ್ಷನ್ 103, 85, 238, 61(1), 64(2)(i) ಅಡಿಯಲ್ಲಿ ಬಂಧಿಸಲಾಗಿದೆ.

# ನೋಟಿಸ್ ನೀಡಲು ಚುನಾವಣಾ ಆಯೋಗದವರು ಯಾರು? ಡಿಕೆ

## ಬಿಜೆಪಿಯ ಯಾರೊಬ್ಬರು ಅನುದಾನ ತಂದಿಲ್ಲ, ತರಲು ಆಸಕ್ತಿಯನ್ನೂ ತೋರಿಲ್ಲ



ಬೆಂಗಳೂರು: ಬಿಜೆಪಿಯಲ್ಲಿ ಕೆಲವೊಂದಷ್ಟು ಖಾಲಿ ಟ್ರಂಕುಗಳಿವೆ. ಅವು ಕೇವಲ ಶಬ್ದ ಮಾತ್ರ ಮಾಡುತ್ತವೆ. ಬರೀ ಶಬ್ದ ಮಾಡುವವರು ಸಂಸತ್ ನಲ್ಲಿ ಮಾತನಾಡಿ, ಪ್ರಧಾನಮಂತ್ರಿಯವರನ್ನು ಭೇಟಿ ಮಾಡಿ ರಾಜ್ಯಕ್ಕೆ ಹತ್ತು ರೂಪಾಯಿಯಾದರೂ ಅನುದಾನ ತೆಗೆದುಕೊಂಡು ಬರಲಿ ಎಂದು ಡಿ.ಕೆ.ಶಿವಕುಮಾರ್ ಅವರು ಛೇಡಿಸಿದರು.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ಬರೀ ಶಬ್ದ ಮಾಡುವವರಿಗೂ ನಾನು ಅನುದಾನದ ವಿಚಾರವಾಗಿ ಎಲ್ಲಾ ಮಾಹಿತಿಗಳನ್ನು ಕಳುಹಿಸಿ ಕೊಡುತ್ತಿದ್ದೇನೆ. ಏಕೆಂದರೆ ಇದುವರೆಗೂ ಯಾರೊಬ್ಬರು ಅನುದಾನ ತಂದಿಲ್ಲ, ತರಲು ಆಸಕ್ತಿಯನ್ನೂ ತೋರಿಲ್ಲ. ಪ್ರಧಾನಿಯವರನ್ನೂ ಭೇಟಿ ಮಾಡಿಲ್ಲ. ರಾಜ್ಯಕ್ಕೆ, ಅದರಲ್ಲೂ ಬೆಂಗಳೂರಿಗಂತೂ ಏನೇನೂ ತಂದಿಲ್ಲ ಎಂದರು.ಬೆಂಗಳೂರು ಅಭಿವೃದ್ಧಿಗೆ ಅನುದಾನ ನೀಡುವ ಬಗ್ಗೆ ಪ್ರಧಾನಿಯವರ ಬಳಿ ಮಾತನಾಡಿದೆ. ಅವರು ನಮ್ಮ ಮನವಿಯನ್ನು ಗಮನಿಸುವುದಾಗಿ ತಿಳಿಸಿದ್ದಾರೆ. ಅವರು ಮಾತನಾಡಿದ ಶೈಲಿ ನೋಡಿದರೆ ನನಗೆ ಅವರ ಮಾತಿನ ಮೇಲೆ ಭರವಸೆಯಿದೆ. ಬೆಂಗಳೂರು ಜಾಗತಿಕ ನಗರ ಎನ್ನುವುದನ್ನು ಅವರು ಒಪ್ಪಿಕೊಂಡಿದ್ದಾರೆ. ಬೆಂಗಳೂರು ಭಾರತವನ್ನು ಪ್ರತಿನಿಧಿಸುತ್ತದೆ ಎಂದರು.

ಬೆಂಗಳೂರು ಅಭಿವೃದ್ಧಿಗೆ ಎಲ್ಲಾ ಪಕ್ಷಗಳು ಕೊಡುಗೆ ನೀಡಿವೆ. ನಾನು ಒಬ್ಬನೇ ಅಥವಾ ನಮ್ಮ ಸರ್ಕಾರದಿಂದಲೇ ಎಲ್ಲಾ ಆಗಿದೆ ಎಂದು ಹೇಳುವುದಿಲ್ಲ. ಬೆಂಗಳೂರು ದೇಶದಲ್ಲಿಯೇ ಪ್ರಮುಖ ನಗರವಾಗಿದೆ. ಇದನ್ನು ಇನ್ನೂ ಅತ್ಯುತ್ತಮ ನಗರವನ್ನಾಗಿ ಮಾಡುವುದು ನಮ್ಮೆಲ್ಲರ ಜವಾಬ್ದಾರಿ. ಇಲ್ಲಿ ರಾಜಕೀಯಕ್ಕಿಂತ ರಾಜ್ಯದ ಹಿತಾಸಕ್ತಿ ಮುಖ್ಯ ಎಂದು ಹೇಳಿದರು.

ರಾಹುಲ್ ಗಾಂಧಿ ಅವರಿಗೆ ಚುನಾವಣಾ ಆಯೋಗ ನೋಟಿಸ್ ನೀಡಿರುವ ಬಗ್ಗೆ ಕೇಳಿದಾಗ, "ನೋಟಿಸ್ ಕೊಡಲಿ ಬಿಡಿ. ಅಷ್ಟಕ್ಕೂ ನೋಟಿಸ್ ನೀಡಲು ಅವರು ಯಾರು? ನಾವೇ ಅವರಿಗೆ ನೋಟಿಸ್ ನೀಡಿದ್ದೇವೆ. ನಮಗೆ ನೋಟಿಸ್ ನೀಡಲು ಅಧಿಕಾರವಿದೆಯೇ ಹೊರತು ಅವರಿಗಲ್ಲ.ನಾವು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ನ್ಯಾಯಯುತವಾಗಿ ಚುನಾವಣೆ ಗೆದ್ದಿದ್ದೇವೆ. ನ್ಯಾಯಯುತವಾಗಿ ಚುನಾವಣೆ ನಡೆಸಲು ಅವರಿಗೆ ಅವಕಾಶವಿದೆಯೇ ಹೊರತು ನೋಟಿಸ್ ನೀಡುವ ಹಕ್ಕಿಲ್ಲ. ಏನಿದ್ದರೂ ಕಾನೂನಾತ್ಮಕವಾಗಿ ಉತ್ತರ ನೀಡುತ್ತೇವೆ" ಎಂದು ಖಡಕ್ಕಾಗಿ ಉತ್ತರಿಸಿದರು.

# ಧರ್ಮಸ್ಥಳ ಪದ್ಮಲತಾ ನಿಗೂಢ ಸಾವು ಪ್ರಕರಣ:
# ಮರು ತನಿಖೆಗೆ ಒತ್ತಾಯಿಸಿ SITಗೆ ದೂರು



ಮಂಗಳೂರು: 38 ವರ್ಷಗಳ ಹಿಂದೆ ಧರ್ಮಸ್ಥಳ ಗ್ರಾಮದಲ್ಲಿ ನಿಗೂಢವಾಗಿ ಸಾವಿಗೀಡಾದ ಪದ್ಮಲತಾ ಪ್ರಕರಣಕ್ಕೆ ಹೊಸ ತಿರುವು ಸಿಕ್ಕಿದ್ದು, ಅವರ ಸಹೋದರಿ ಪ್ರಕರಣವನ್ನು ಮರು ತನಿಖೆ ಮಾಡಬೇಕು ಎಂದು ಧರ್ಮಸ್ಥಳದಲ್ಲಿ ನಡೆದಿದೆ ಎನ್ನಲಾದ ಸಾಮೂಹಿಕ ಅಂತ್ಯಕ್ರಿಯೆ ಪ್ರಕರಣದ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡಕ್ಕೆ (ಎಸ್‌ಐಟಿ) ದೂರು ನೀಡಿದ್ದಾರೆ. ಪದ್ಮಲತಾ ಅವರ ಸೋದರಿ ಇಂದ್ರಾವತಿ ಸೋಮವಾರ ತಮ್ಮ ಕುಟುಂಬಸ್ಥರೊಂದಿಗೆ ಎಸ್‌ಐಟಿ ಕಚೇರಿಗೆ ಆಗಮಿಸಿ ದೂರು ದಾಖಲಿಸಿದ್ದಾರೆ.

## ಸೋದರಿ ಇಂದ್ರಾವತಿಯಿಂದ ಎಸ್‌ಐಟಿಗೆ ಮರು ತನಿಖೆ ಬೇಡಿಕೆ

ನೆಲ್ಯಾಡಿ ನಿವಾಸಿ ಇಂದ್ರಾವತಿ ಸಲ್ಲಿಸಿರುವ ದೂರಿನಲ್ಲಿ, 'ಉಜಿರೆಯ ಎಸ್‌ಡಿಎಂ ಕಾಲೇಜಿನಲ್ಲಿ ದ್ವಿತೀಯ ಪಿಯು ಓದುತ್ತಿದ್ದ ನನ್ನ ಸಹೋದರಿ ಪದ್ಮಲತಾ 1986ರ ಡಿಸೆಂಬರ್ 22 ರಂದು ಧರ್ಮಸ್ಥಳ ತಲುಪಿದ ನಂತರ ನಾಪತ್ತೆಯಾಗಿದ್ದರು. ಅವರ ಕೊಳೆತ ಶವ 1987ರ ಫೆಬ್ರುವರಿ 17 ರಂದು ನೆರಿಯ ಹೊಳೆ ಬಳಿ ಪತ್ತೆಯಾಗಿತ್ತು. ನನ್ನ ತಂದೆಯ ಮನೆ ಮೊದಲು ಬೋಳಿಯಾರ್‌ನಲ್ಲಿತ್ತು. ಸಿಪಿಐಎಂ ನಾಯಕರಾಗಿದ್ದ ನನ್ನ ತಂದೆ ದಿವಂಗತ ದೇವಾನಂದ ಅವರು ನ್ಯಾಯಕ್ಕಾಗಿ ಹೋರಾಡಿದ್ದರು ಮತ್ತು ಅಪಹರಣ, ಅತ್ಯಾಚಾರ ಮತ್ತು ಕೊಲೆ ಆರೋಪದಲ್ಲಿ ಭಾಗಿಯಾಗಿರುವ ಅಪರಾಧಿಗಳಿಗೆ ಕಠಿಣ ಶಿಕ್ಷೆ ವಿಧಿಸಬೇಕೆಂದು ಒತ್ತಾಯಿಸಿದ್ದರು' ಎಂದಿದ್ದಾರೆ.

'ಸಾರ್ವಜನಿಕ ಒತ್ತಡದ ನಂತರ ಆಗಿನ ಸರ್ಕಾರ ಸಿಒಡಿ ತನಿಖೆಯನ್ನು ಪ್ರಾರಂಭಿಸಿತ್ತು. ಈ ವಿಷಯವನ್ನು ವಿಧಾನಸಭಾ ಅಧಿವೇಶನದಲ್ಲಿ ಕೂಡ ಚರ್ಚಿಸಲಾಯಿತು ಮತ್ತು ಆಗಿನ ಸಚಿವ ರಾಚಯ್ಯ ಬೋಳಿಯಾರ್‌ನಲ್ಲಿರುವ ನಮ್ಮ ಮನೆಗೆ ಭೇಟಿ ನೀಡಿ, ನ್ಯಾಯ ಕೊಡಿಸುವ ಭರವಸೆ ನೀಡಿದ್ದರು. ಆದರೆ, ತನಿಖೆಯಿಂದ ನ್ಯಾಯ ಸಿಗಲಿಲ್ಲ ಮತ್ತು ಪ್ರಕರಣವನ್ನು ಮುಚ್ಚಿಹಾಕಲಾಯಿತು. ಅಪಹರಣ, ಅತ್ಯಾಚಾರ ಮತ್ತು ಕೊಲೆಯ ವಿರುದ್ಧ ಒಂದು ದಿನ ನಮಗೆ ನ್ಯಾಯ ಸಿಗುತ್ತದೆ ಎಂಬ ಭರವಸೆಯೊಂದಿಗೆ ನನ್ನ ಸಹೋದರಿಯ ಶವವನ್ನು ಹೂಳಿದೆವು. ಆದ್ದರಿಂದ, ಆಕೆಯ ಶವವನ್ನು ಹೊರತೆಗೆದರೆ, ನಮಗೆ ನ್ಯಾಯ ಸಿಗುತ್ತದೆ ಎಂದು ನಾವು ಭಾವಿಸುತ್ತೇವೆ. ಎಸ್‌ಐಟಿ ತನಿಖೆ ನಡೆಸಿದರೆ ಈ ಪ್ರಕರಣದ ಆರೋಪಿಗಳನ್ನು ಕಾನೂನಿನ ಮುಂದೆ ತರಬಹುದು ಎಂಬ ನಂಬಿಕೆಯಿದೆ' ಎಂದು ದೂರಿನಲ್ಲಿ ತಿಳಿಸಿದ್ದಾರೆ.

ದೂರು ನೀಡಲು ಬಂದ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಸ್‌ಐಟಿ ಪ್ರಕರಣದ ತನಿಖೆ ಕೈಗೆತ್ತಿಕೊಂಡರೆ ನಮ್ಮ ಬಳಿ ಇರುವ ಸಾಕ್ಷ್ಯಗಳು ಹಾಗೂ ಮಾಹಿತಿಗಳನ್ನು ತನಿಖಾ ತಂಡಕ್ಕೆ ನೀಡಲು ಸಿದ್ಧರಿದ್ದೇವೆ. ಪದ್ಮಲತಾಳ ಹತ್ಯೆಯಾಗಿ 39 ವರ್ಷಗಳು ಕಳೆದಿದ್ದರೂ, ಮರು ತನಿಖೆ ಮಾಡಿದರೆ ಈಗಲೂ ಸತ್ಯ ಹೊರಬರುವ ನಿರೀಕ್ಷೆಯಿದೆ. ಪ್ರಕರಣದ ತನಿಖೆ ನಡೆಸಿ ಕುಟುಂಬಕ್ಕೆ ನ್ಯಾಯ ಒದಗಿಸಬೇಕು ಎಂದು ಎಸ್‌ಐಟಿಯನ್ನು ಒತ್ತಾಯಿಸಿದ್ದಾರೆ.


- 1986ರಲ್ಲಿ ಪದ್ಮಲತಾ ಧರ್ಮಸ್ಥಳದಲ್ಲಿ ನಾಪತ್ತೆ - 1987ರಲ್ಲಿ ಶವ ಪತ್ತೆ
- ಸಿಒಡಿ ತನಿಖೆಯಲ್ಲೂ ಅನ್ಯಾಯ
- ಸೋದರಿ ಇಂದ್ರಾವತಿಯಿಂದ ಎಸ್‌ಐಟಿಗೆ ಮರು ತನಿಖೆ ಬೇಡಿಕೆ
- "ಶವ ಹೊರತೆಗೆದರೆ ಸತ್ಯ ಬಹಿರಂಗ"?

# Youtuber ಮೇಲೆ ಹಲ್ಲೆ, ಪೊಲೀಸ್ ಕರ್ತವ್ಯಕ್ಕೆ ಅಡ್ಡಿ ಪ್ರಕರಣ; 6 ಮಂದಿ ಬಂಧನ

ಬೆಳ್ತಂಗಡಿ: ಧರ್ಮಸ್ಥಳ ಗ್ರಾಮದ ಪಾಂಗಳ ಕ್ರಾಸ್‌ನಲ್ಲಿ ಆ.6ರಂದು ಸಂಜೆ ಯೂಟ್ಯೂಬರ್ ಮೇಲೆ ನಡೆದ ಹಲ್ಲೆ ಹಾಗೂ ಪಾಂಗಳ ಕ್ರಾಸ್ ನಲ್ಲಿ ನಡೆದ ಘರ್ಷಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಧರ್ಮಸ್ಥಳ ಪೊಲೀಸರು ಆರು ಆರೋಪಿಗಳನ್ನು ಮಂದಿಯನ್ನು ಶನಿವಾರ ಬಂಧನಕ್ಕೊಳಪಡಿಸಿದ್ದಾರೆ.

ಸ್ಥಳೀಯ ನಿವಾಸಿಗಳಾದ ಪದ್ಮಪ್ರಸಾದ್, ಸುಹಾಸ್, ಗುರುಪ್ರಸಾದ್, ಶಶಿಕುಮಾರ್, ಕಲಂದರ್, ಚೇತನ್ ಬಂಧಿತರು. 6 ಮಂದಿಯನ್ನು ಶನಿವಾರ ರಾತ್ರಿ ಬಂಧಿಸಿ, ಬೆಳ್ತಂಗಡಿ ನ್ಯಾಯಾಧೀಶರ ಮನೆಗೆ ಹಾಜರುಪಡಿಸಲಾಗಿತ್ತು.ನ್ಯಾಯಾಧೀಶರು 6 ಮಂದಿಗೂ ಮಧ್ಯಂತರ ಜಾಮೀನು ನೀಡಿದ್ದು, ಸೋಮವಾರ ಬೆಳ್ತಂಗಡಿ ನ್ಯಾಯಾಲಯಕ್ಕೆ ಹಾಜರಾಗಲು ಆದೇಶಿಸಿದ್ದಾರೆ. ಆ.6 ರಂದು ಸಂಜೆ ಧರ್ಮಸ್ಥಳ ಗ್ರಾಮ ಕೇಸ್ ವರದಿ ಮಾಡಲು ಹೋಗಿದ್ದ ಯೂಟ್ಯೂಬರ್ ಮೇಲೆ ಪಾಂಗಳ ಕ್ರಾಸ್ ನಲ್ಲಿ ಹಲ್ಲೆ ನಡೆಸಲಾಗಿತ್ತು. ಬಳಿಕ, ಎರಡು ಗುಂಪುಗಳ ನಡುವೆ ಘರ್ಷಣೆ ನಡೆದಿತ್ತು. ಈ ಸಂಬಂಧ ಧರ್ಮಸ್ಥಳ ಪೊಲೀಸ್ ಠಾಣೆಯಲ್ಲಿ ಪೊಲೀಸರು ಸ್ವಯಂ ಪ್ರೇರಿತ ಪ್ರಕರಣ ದಾಖಲಿಸಿಕೊಂಡು, 27 ಮಂದಿ ವಿರುದ್ಧ ಕೇಸ್ ದಾಖಲಿಸಿದ್ದರು. ಸ್ಥಳದಿಂದ ತೆರಳುವಂತೆ ಸೂಚಿಸಿದರೂ ಕಿವಿಗೊಡದ ಆರೋಪಿಗಳು ಹಲ್ಲೆ ಹಾಗೂ ಬಲಪ್ರಯೋಗದ ಮೂಲಕ ಕರ್ತವ್ಯ ನಿರ್ವಹಣೆಗೆ ತಡೆಯೊಡ್ಡಿದ್ದರು. ಅಲ್ಲಿದ್ದ ಎರಡೂ ಗುಂಪುಗಳು ಪರಸ್ಪರ ತಳ್ಳಾಟ ಮತ್ತು ಹಲ್ಲೆಯಲ್ಲಿ ತೊಡಗಿದ್ದವು.

# ಎಸ್ಟೇಟ್ ಬಳಿ ಆನೆ ಹಿಂಡು ಪ್ರತ್ಯಕ್ಷ; ಜನರಲ್ಲಿ ಹೆಚ್ಚಿದ ಆತಂಕ



ಮಡಿಕೇರಿ: ಕೊಡಗಿನ ಬಡಗ ಬನಂಗಾಲ ಗ್ರಾಮದ ಎಸ್ಟೇಟ್ ಬಳಿ 30 ಕ್ಕೂ ಹೆಚ್ಚು ಆನೆಗಳು ಹಿಂಡು ಓಡಾಡುತ್ತಿರುವುದು ಕಂಡು ಬಂದಿದ್ದು, ಇದು ಸ್ಥಳೀಯರಲ್ಲಿ ಆತಂಕ ಹೆಚ್ಚಾಗುವಂತೆ ಮಾಡಿದೆ. ಸುತ್ತಮುತ್ತಲಿನ ಪ್ರದೇಶಗಳಲ್ಲಿ ಆನೆಗಳ ಉಪಟಳ ಹೆಚ್ಚುತ್ತಿರುವ ಬಗ್ಗೆ ದೂರುಗಳು ಬಂದ ನಂತರ ಅರಣ್ಯ ಇಲಾಖೆ ಆನೆಗಳನ್ನು ಓಡಿಸಲು ಕಾರ್ಯಾಚರಣೆಯನ್ನು ಕೈಗೆತ್ತಿಕೊಂಡಿತ್ತು. ಈ ವೇಳೆ ಎಸ್ಟೇಟ್'ವೊಂದರ ಬಳಿ 30 ಆನೆಗಳಿರುವುದು ಪತ್ತೆಯಾಗಿದೆ.

ಎಸ್ಟೇಟ್ ಬೆಳೆಗಾರರು ಸೇರಿದಂತೆ ಗ್ರಾಮಸ್ಥರು ಎಸ್ಟೇಟ್ ಮಿತಿಯಲ್ಲಿ ಆನೆಗಳ ಚಲನೆ ಹೆಚ್ಚುತ್ತಿರುವ ಬಗ್ಗೆ ಇಲಾಖೆಗೆ ದೂರು ನೀಡಿದರು. ಇದರ ನಂತರ, ಎಲ್ಲಾ ಕಾಡು ಆನೆಗಳನ್ನು ಕಾಡಿಗೆ ಓಡಿಸಲು ಕಾರ್ಯಾಚರಣೆಯನ್ನು ಆರಂಭಿಸಲಾಯಿತು. ತಿತಿಮತಿ ವಿಭಾಗದ ಅರಣ್ಯ ಇಲಾಖೆ ಸಿಬ್ಬಂದಿ ಎಲ್ಲಾ ಕಾಡು ಆನೆಗಳನ್ನು ಕಾಡಿಗೆ ಓಡಿಸಲು ಕಾರ್ಯಾಚರಣೆಯನ್ನು ಪ್ರಾರಂಭಿಸಿದರು. ಕಾರ್ಯಾಚರಣೆಯ ಸಮಯದಲ್ಲಿ, ಎಸ್ಟೇಟ್ ಮತ್ತು ಗ್ರಾಮ ವ್ಯಾಪ್ತಿಯಲ್ಲಿ ಹಿಂಡಾಗಿ ನಿಂತಿದ್ದ 30 ಕ್ಕೂ ಹೆಚ್ಚು ಕಾಡು ಆನೆಗಳು ಅರಣ್ಯಾಧಿಕಾರಿಗಳ ಕಣ್ಣಿಗೆ ಬಿದ್ದಿವೆ. ಈ ವೇಳೆ ಆನೆಗಳನ್ನು ಕಾಡಿಗೆ ಓಡಿಸಲು ಮುಂದಾದ ಸಿಬ್ಬಂದಿಗಳಿಗೆ ಹಲವು ಸವಾಲುಗಳು ಎದುರಾಗಿವೆ. ಮಳೆಯ ನಂತರ ಎಸ್ಟೇಟ್ ಭೂಮಿ ತೇವ ಮತ್ತು ಕೆಸರುಮಯವಾಗಿದ್ದರಿಂದ ಸವಾಲಿನ ಪರಿಸ್ಥಿತಿಯನ್ನು ಎದುರಿಸಿದ್ದಾರೆ. ಸಾಕಷ್ಟು ಪ್ರಯತ್ನಗಳ ಬಳಿಕ ಆನೆಗಳನ್ನು ಕಾಡಿಗೆ ಓಡಿಸಲಾಗಿದೆ.

ಕೆಲ ಆನೆಗಳ ಹಿಂಡು ಮರಿಗಳನ್ನು ಹೊಂದಿದ್ದು, ಒಂದೆರೆಡು ಆನೆಗಳು ಹಿಂಡು ಸ್ಥಳದಿಂದ ಕದಲಲಿಲ್ಲ ಎಂದು ಅಧಿಕಾರಿಗಳು ಹೇಳಿದ್ದಾರೆ.

ಎಸ್ಟೇಟ್ ಮಿತಿಯಲ್ಲಿ ಇನ್ನೂ ಉಳಿದುಕೊಂಡಿರುವ ಆನೆ ಹಿಂಡುಗಳ ಚಲನವಲನಗಳನ್ನು ಪತ್ತೆಹಚ್ಚಲು ಕ್ಷಿಪ್ರ ಪ್ರತಿಕ್ರಿಯೆ ತಂಡವನ್ನು ಸ್ಥಳದಲ್ಲಿ ನಿಯೋಜಿಸಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಮಳೆಯಿಂದಾಗಿ ನಾವು ಈಗಾಗಲೇ ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತೇವೆ. ಇದೀಗ ಆನೆಗಳ ಹಾವಳಿ ಪರಿಸ್ಥಿತಿ ಮತ್ತಷ್ಟು ಹದಗೆಡುವಂತೆ ಮಾಡುತ್ತಿದೆ ಎಂದು ಇಲ್ಲಿನ ಬೆಳೆಗಾರರು ಬೇಸರ ವ್ಯಕ್ತಪಡಿಸಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.